1339 (1533) ಶ್ರೀ ರವಿ ಪಿ.ಟಿ. (ಚಿಕ್ಕಮಗಳೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅನೇಕ ಪ್ರಮುಖ ಪ್ರವಾಸಿ ತಾಣಗಳಿಗೆ ಇನ್ನೂ ಕೂಡಾ ಕೆ.ಎಸ್.ಆರ್.ಟಿ.ಸಿ. ಬಸ್ ಸಂಚಾರ ಸೌಲಭ್ಯವಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯದಲ್ಲಿ ಪ್ರಮುಖ ಯಾತ್ರಾ ಸ್ಥಳ ದತ್ತ ಪೀಠಕ್ಕೆ ಮತ್ತು ಕೆಮ್ಮಣ್ಣು ಗುಂಡಿಗೆ ಕೆ.ಎಸ್.ಆರ್.ಟಿ.ಸಿ. ಬಸ್ ಸೌಲಭ್ಯ ಕಲ್ಪಿಸಿಲ್ಲದಿರುವುದಕ್ಕೆ ಕಾರಣವೇನು?

ಶ್ರೀ ಎಸ್. ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಇಲ್ಲ.

ಕೆ.ಎಸ್.ಆರ್.ಟಿ.ಸಿ.ಯು ಸಾರಿಗೆಗಳನ್ನು ಮಜಲು ವಾಹನಗಳಾಗಿ ಕಾರ್ಯಾಚರಣೆಗೊಳಿಸುತ್ತಿದ್ದು ಮಾರ್ಗಗಳಲ್ಲಿ ಬರುವ ಪ್ರಮುಖ ಪ್ರವಾಸಿ ತಾಣಗಳಿಗೆ ಸಾರಿಗೆ ಸೌಲಭ್ಯಗಳನ್ನು ಒದಗಿಸುತ್ತಿದೆ.

ಆ) ಚಿಕ್ಕಮಗಳೂರಿನಿಂದ ದತ್ತಪೀಠಕ್ಕೆ ಸಾರಿಗೆ ಕಾರ್ಯಾಚರಣೆ ಮಾಡಲು ರಹದಾರಿ ಇರುವುದಿಲ್ಲ.

ಚಿಕ್ಕಮಗಳೂರು ಕೆಮ್ಮಣ್ಣು ಗುಂಡಿಯ ನಡುವೆ ಕಾರ್ಯಾಚರಣೆ ಮಾಡಲು ನೀಡಲಾಗಿದ್ದ ರಹದಾರಿಯಲ್ಲಿ ಮಾರ್ಗಮಧ್ಯೆ ಪ್ರಯಾಣಿಕರನ್ನು ಹತ್ತಿಸಿಕೊಳ್ಳದಂತೆ/ಇಳಿಸದಂತೆ ಷರತ್ತನ್ನು ವಿಧಿಸಿದ ಕಾರಣ ಸಾರಿಗೆಯನ್ನು ಪ್ರಾರಂಭಿಸಿರುವುದಿಲ್ಲ. ಸದರಿ ಷರತ್ತನ್ನು ತೆಗೆದುಹಾಕಲು ಪ್ರಾಧಿಕಾರವು ಸಮ್ಮತಿಸಿರುವುದರಿಂದ ದಿ: 1-9-2007ರಿಂದ ಚಿಕ್ಕಮಗಳೂರು ಕೆಮ್ಮಣ್ಣು ಗುಂಡಿಯ ಮಾರ್ಗದಲ್ಲಿ ಸಾರಿಗೆಯನ್ನು ಪ್ರಾರಂಭಿಸಲಾಗುವುದು.

1340 (1568) ಶ್ರೀಮತಿ ಟಿ.ಶೆಟ್ಟಿ (ಪುತ್ತೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕು ಕೆ.ಎಸ್.ಆರ್.ಟಿ.ಸಿ. ಡಿಪೋದಲ್ಲಿ ಮಂಜೂರಾದ ಚಾಲಕ/ ನಿರ್ವಾಹಕ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರು ಎಷ್ಟು; ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು);

ಆ) ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;